# ಕರ್ನಾಟಕ ಸರ್ಕಾರ
## ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ ಬೆಂಗಳೂರು

**ಪತ್ರಿಕಾ ಪ್ರಕಟಣೆ** **ದಿನಾಂಕ: 14-01-2022**

1) ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆ 1965ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಾರ್ಖಾನೆಗಳು, ಪ್ಲಾಂಟೇಶನ್‌ಗಳು, ಮೋಟಾರು ವಾಹನ ಸಂಸ್ಥೆಗಳು 50 ಮತ್ತು ಅದಕ್ಕಿಂತ ಹೆಚ್ಚು ಕಾರ್ಮಿಕರನ್ನು ಹೊಂದಿರುವ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು, ಚಾರಿಟಬಲ್ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು/ITBT ಸಂಸ್ಥೆಗಳು, ಕರ್ನಾಟಕ ಸೊಸೈಟಿ ಕಾಯ್ದೆ 1960ರ ಅಡಿಯಲ್ಲಿ ನೊಂದಣಿಯಾಗಿರುವ ಸಂಘಗಳು ಹಾಗೂ

2) 50 ಮತ್ತು ಅದಕ್ಕಿಂತ ಹೆಚ್ಚು ಕಾರ್ಮಿಕರನ್ನು ಹೊಂದಿರುವ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು, ಕಡ್ಡಾಯವಾಗಿ ಆನ್‌ಲೈನ್ ಮುಖಾಂತರ ವಂತಿಕೆ ಪಾವತಿಸಬೇಕಾಗಿರುತ್ತದೆ.

3) **ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 5 ಶಾಸನ 2016, ಬೆಂಗಳೂರು, ದಿನಾಂಕ: 06.04.2017 ರ ತಿದ್ದುಪಡಿಯನ್ನು ದಿನಾಂಕ: 01-12-2020 ರಂದು ನಿರಸನಗೊಳಿಸಿ ಕರ್ನಾಟಕ ರಾಜ್ಯದ ವಿಶೇಷ ರಾಜ್ಯ ಪತ್ರಿಕೆಯಲ್ಲಿ ಪ್ರಕಟಗೊಳಿಸಲಾಗಿದೆ. ಈ ತಿದ್ದುಪಡಿ ಕಾಯ್ದೆಯನ್ನು ಮೂಲ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆ 1965 ಸೆಕ್ಷನ್ 7ಎ ಗೆ ಸೇರಿಸಲಾಗಿದೆ.** ಆದ್ದರಿಂದ ಪ್ರತಿ ಕಾರ್ಮಿಕನಿಗೆ ರೂ.20/- ಮಾಲೀಕರು/ಸಂಸ್ಥೆಗಳಿಂದ ರೂ.40/- ರಂತೆ ಒಟ್ಟು ರೂ 60/- ಗಳನ್ನು ಕಾರ್ಖಾನೆ/ಸಂಸ್ಥೆಯಲ್ಲಿ ಕೆಲಸ ನಿರ್ವಹಿಸುವ ಒಟ್ಟು ಕಾರ್ಮಿಕರ ಸಂಖ್ಯೆಗನುಗುಣವಾಗಿ ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿಗೆ ವಂತಿಗೆ ಪಾವತಿಸುವುದು ಕಡ್ಡಾಯವಾಗಿರುತ್ತದೆ.

4) ಈ ಕಾಯ್ದೆಯಡಿಯಲ್ಲಿ ಆನ್‌ಲೈನ್ ಮುಖಾಂತರ ವಂತಿಗೆ ಪಾವತಿಸಬೇಕಾದ ವೆಬ್‌ಸೈಟ್ ವಿಳಾಸ **www.klwb.karnataka.gov.in**

**ವಂತಿಗೆ ಪಾವತಿಗೆ ಕಡೆಯ ದಿನಾಂಕ: 15-01-2022 ಎಂದು ನಿಗದಿಪಡಿಸಲಾಗಿತ್ತು. ಆದರೆ ಕರೋನಾ ಮತ್ತು ಒಮಿಕ್ರಾನ್ ವೈರಾಣು ಹೆಚ್ಚುತ್ತಿರುವ ಹಿನ್ನಲೆಯಲ್ಲಿ ವಂತಿಕೆ ಪಾವತಿಗಾಗಿ ಕೊನೆಯ ದಿನಾಂಕವನ್ನು ದಿನಾಂಕ: 31-01-2022 (2021 ನೇ ಕ್ಯಾಲೆಂಡರ್ ವರ್ಷಕ್ಕೆ) ರವರೆಗೆ ವಿಸ್ತರಿಸಲಾಗಿದೆ.**

**ನಿಯಮ ಪಾಲಿಸದ ಸಂಸ್ಥೆಗಳಿಗೆ ಮೊದಲ 3 ತಿಂಗಳಿಗೆ ಶೇಕಡ 12 ರಂತೆ ಹಾಗೂ ನಂತರದ ತಿಂಗಳಿಗೆ ಶೇಕಡ 18 ರಂತೆ ಬಡ್ಡಿಯನ್ನು ದಂಡವಾಗಿ ವಿಧಿಸಬಹುದು, ಹಾಗೂ ಕಲ್ಯಾಣ ಆಯುಕ್ತರಿಂದ ತಪಾಸಣೆ/ ತನಿಖೆಗೆ ಒಳಪಡಬೇಕಾಗುತ್ತದೆ.**

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8277291175, 8277120505, 080-23475188 ಮೂಲಕ ಸಂಪರ್ಕಿಸಬಹುದು.

ಕಲ್ಯಾಣ ಆಯುಕ್ತರು
ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ
ಯಶವಂತಪುರ, ಬೆಂಗಳೂರು.